**ಕರ್ನಾಟಕ ಸರ್ಕಾರ**

ಸಂಖ್ಯೆ:ಕಂಇ 99 ಮುಅಬಿ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:20-11-2020

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ,

ವ್ಯವಸ್ಥಾಪಕ ನಿರ್ದೇಶಕರು,
ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ,
14/3, ಅನೆಕ್ಸ್ ಬಿಲ್ಡಿಂಗ್, 3ನೇ ಮಹಡಿ,
ಶ್ರೀ ಅರವಿಂದ ಭವನ, ಮಿಥಿಕ್ ಸೊಸೈಟಿ ಆವರಣ,
ನೃಪತುಂಗ ರಸ್ತೆ, ಬೆಂಗಳೂರು-560 001.

ಮಾನ್ಯರೆ,

ವಿಷಯ:- ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ 'ಸಾಂದೀಪನಿ ಶಿಷ್ಯವೇತನ ಯೋಜನೆ' ಯಡಿಯಲ್ಲಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಕೋರ್ಸ್‌ಗಳನ್ನು ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ನಿರ್ವಹಣಾ ವೆಚ್ಚ ಮತ್ತು ಶುಲ್ಕ ಮರುಪಾವತಿ ಮಾಡಲು ಸರ್ಕಾರದಿಂದ ಅನುಮೋದನೆ ಕೋರುವ ಬಗ್ಗೆ.

ಉಲ್ಲೇಖ:- ಪತ್ರ ಸಂಖ್ಯೆ:ಕೆ.ಬಿ.ಡಿ.ಬಿ/ಸಿಆರ್/33/2020-21, ದಿನಾಂಕ:22.10.2020.

/ * /

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದ ಕಡೆ ಗಮನ ಸೆಳೆಯಲಾಗಿದೆ. ಸದರಿ ಪತ್ರದಲ್ಲಿ ಕೋರಿರುವುದರನ್ವಯ ಪ್ರಸ್ತಾವನೆಯಲ್ಲಿ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ 'ಸಾಂದೀಪನಿ ಶಿಷ್ಯವೇತನ ಯೋಜನೆ' ಯಡಿಯಲ್ಲಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಕೋರ್ಸ್‌ಗಳನ್ನು ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ನಿರ್ವಹಣಾ ವೆಚ್ಚ ಮತ್ತು ಶುಲ್ಕ ಮರುಪಾವತಿ ಮಾಡಲು ಸರ್ಕಾರದಿಂದ ಅನುಮೋದನೆ ಕೋರಿರುವ ಕುರಿತು ಪರಿಶೀಲಿಸಲಾಗಿದೆ.

ಉಲ್ಲೇಖಿತ ಪತ್ರದಲ್ಲಿ ಪ್ರಸ್ತಾಪಿಸಿರುವ ಯೋಜನೆಗಳನ್ನು ಜಾರಿಗೆ ತರಲು ಅನುಮತಿ ನೀಡಲಾಗಿದೆ ಹಾಗೂ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಅವಶ್ಯವಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ 4059-80-051-0-55-(132) ಇದರಡಿಯಲ್ಲಿ ಲಭ್ಯವಿರುವ ಮೊತ್ತದಲ್ಲಿ ಭರಿಸಲು ಅನುಮತಿ ನೀಡಲಾಗಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

M.L. Varalakshmi 20/11/2020

**(ಎಂ.ಎಲ್.ವರಲಕ್ಷ್ಮೀ)**
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಮುಜರಾಯಿ)